# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 678 |
| ಸದಸ್ಯರ ಹೆಸರು | : | ಶ್ರೀ ಕೇಶವ ಪ್ರಸಾದ್ ಎಸ್. |
| ಉತ್ತರಿಸುವ ದಿನಾಂಕ | : | 13-12-2024. |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಮತ್ತು ಜಗಜೀವನರಾಂ ಭವನಗಳನ್ನು ನಿರ್ಮಿಸಿ ಕಾಮಗಾರಿ ಪೂರ್ಣಗೊಂಡಿರುವ ಮತ್ತು ಕಾಮಗಾರಿ ಪ್ರಾರಂಭಗೊಳ್ಳದ ಭವನಗಳೆಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು) | ತಾಲ್ಲೂಕುವಾರು ಸಂಪೂರ್ಣ ವಿವರವನ್ನು CD ಯಲ್ಲಿ ನೀಡಿದೆ. |
| ಆ) | ಈ ಭವನಗಳ ನಿರ್ಮಾಣ ಕಾರ್ಯ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು; ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯ ಹಣವನ್ನು ಬಳಸಿಕೊಂಡು ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು; (ಮಾಹಿತಿ ನೀಡುವುದು) | ಭವನ ನಿರ್ಮಾಣ ಮಾಡಲು ಮಂಜೂರಾತಿ ನೀಡಿರುವ ಕೆಲವು ಸ್ಥಳಗಳಲ್ಲಿ ನಿವೇಶನ ಲಭ್ಯವಿಲ್ಲದ ಕಾರಣ ಕಾಮಗಾರಿಗಳು ಪ್ರಾರಂಭಗೊಂಡಿರುವುದಿಲ್ಲ.<br><br>2024-25ನೇ ಸಾಲಿನಲ್ಲಿ ಭವನಗಳ ನಿರ್ಮಾಣ ಕಾರ್ಯಕ್ರಮದಡಿ ಒಟ್ಟು ರೂ.110.00 ಕೋಟಿಗಳನ್ನು ನಿಗಧಿಪಡಿಸಲಾಗಿರುತ್ತದೆ. ಈ ಪೈಕಿ ಮೂರು ತ್ರೈಮಾಸಿಕ ಕಂತುಗಳಲ್ಲಿ ರೂ.80.00 ಕೋಟಿಗಳನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗಿದ್ದು, ಸದರಿ ಅನುದಾನವನ್ನು ಕಾಮಗಾರಿಗಳಿಗೆ ಪ್ರಾರಂಭಗೊಂಡಿರುವ ಭವನಗಳಿಗೆ ಉಪಯೋಗಿಸಲಾಗುತ್ತಿದೆ. |
| ಇ) | ಕಾಮಗಾರಿ ಪೂರ್ಣಗೊಳ್ಳಲು ಅಗತ್ಯ ಇರುವ ಹಣವನ್ನು ತುರ್ತಾಗಿ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; | |

| | | |
|---|---|---|
| ಈ) | ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮದಲ್ಲಿ ಡಾ:ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೇಯೆ; ಹಾಗಿದ್ದರೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು? | ಸರ್ಕಾರದ ಆದೇಶ ಸಂ:ಸಕಇ 129 ಎಸ್‌ಎಲ್‌ಪಿ 2023, ದಿನಾಂಕ:24-03-2023ರಲ್ಲಿ ವಿಜಯಪುರ ಜಿಲ್ಲೆಯ, ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮದಲ್ಲಿ ಡಾ\|\| ಬಿ.ಆರ್ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ರೂ.50.00 ಲಕ್ಷಗಳಿಗೆ ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ. ಆದರೆ, ಹೊಸ ಸರ್ಕಾರ ರಚನೆಯಾಗಿರುವ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ-1: ಟಿಎಫ್‌ಪಿ-2023, ದಿನಾಂಕ:31-07-2023 ರ ಸುತ್ತೋಲೆಯ ಕ್ರ.ಸಂ. 3 ರಲ್ಲಿ, ಹಿಂದಿನ ಸರ್ಕಾರದಿಂದ ಅನುಮೋದನೆಗೊಂಡು ಇನ್ನೂ ಪ್ರಾರಂಭವಾಗದಿರುವ (unstarted) ಕಾಮಗಾರಿಗಳ ಬಗ್ಗೆ ಸಂಬಂಧಪಟ್ಟ ಸಚಿವರ ಅನುಮೋದನೆಯೊಂದಿಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳಲು ಆಡಳಿತ ಇಲಾಖೆಯ ಕಾರ್ಯದರ್ಶಿಗಳು ಕ್ರಮವಹಿಸುವಂತೆ ತಿಳಿಸಲಾಗಿರುತ್ತದೆ.<br><br>ಪ್ರಸ್ತುತ ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮದಲ್ಲಿ ಡಾ:ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಮಂಜೂರಾತಿ ನೀಡಲು ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

**No: SWD/887/PKV/2024**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.